# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು.

ದೂರವಾಣಿ ಸಂಖ್ಯೆ: 0821–2330453

**ನೇಮಕಾತಿ ಅಧಿಸೂಚನೆ ಸಂಖ್ಯೆ: ಆಡಳಿತ/ನೇ/ಆ–ಜಾ/264/2026,**
**ದಿನಾಂಕ: 24.04.2026**

**ವಿಷಯ:** ಮೈಸೂರು ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 11 ಆದೇಶ ಜಾರಿಕಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

*****

ಮೈಸೂರು ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 11 ಆದೇಶ ಜಾರಿಕಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಅರ್ಜಿಗಳನ್ನು ಮೈಸೂರು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ವೆಬ್ ಸೈಟ್ https://mysuru.dcourts.gov.in/notice-category/recruitments/ ಅಥವಾ https://mysuru.dcourts.gov.in/Judges/online-recruitment/ ರಲ್ಲಿ ನೀಡಲಾದ ಲಿಂಕ್ ಮೂಲಕ ಆನ್ ಲೈನ್ ನಲ್ಲಿ ದಿನಾಂಕ **28.04.2026** ರಿಂದ ದಿನಾಂಕ **31.05.2026** ರ ರಾತ್ರಿ 11.59 ರವರೆಗೆ ಮಾತ್ರ ಸಲ್ಲಿಸತಕ್ಕದ್ದು ಮತ್ತು ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ **02.06.2026** ಆಗಿರುತ್ತದೆ.

**ಹುದ್ದೆಯ ಹೆಸರು: ಆದೇಶ ಜಾರಿಕಾರರು**

ಖಾಲಿ ಹುದ್ದೆಗಳು: **11**

ವೇತನ ಶ್ರೇಣಿ: **31775 - 725 - 32500 - 800 - 35700 - 900 - 39300 - 1000 - 43300 - 1125 - 47800 - 1250 - 52800 - 1375 - 58300 - 1500 - 61300.**

## ಹುದ್ದೆಗಳ ವರ್ಗೀಕರಣ : 11 ಹುದ್ದೆಗಳು

| ಮೀಸಲಾತಿ | ಇತರೆ | ಮ.ಅ | ಗ್ರಾ.ಅ | ಮಾ.ಸೈ.ಅ | ಅಂ.ಅ | ಒಟ್ಟು |
|---|---|---|---|---|---|---|
| **ಸಾಮಾನ್ಯ** | 1 | 2 | 2 | | 1* | **6** |
| **ಪ.ಜಾತಿ** | 1 | | | | | **1** |
| **ಪ್ರವರ್ಗ 1** | | | 1 | | | **1** |
| **ಪ್ರವರ್ಗ 2 ಎ** | 1 | | | 1 | | **2** |
| **ಪ್ರವರ್ಗ 2 ಬಿ** | | 1 | | | | **1** |
| **ಒಟ್ಟು** | **3** | **3** | **3** | **1** | **1** | **11** |

* Autism, Intellectual disability, Specific learning disability and Mental illness, Multiple Disabilities from amongst perrsons under clause (a) to (d) including deaf – blindness in the posts identified for each disabilities.

**ವಿದ್ಯಾರ್ಹತೆ:** 10 ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಆಯ್ಕೆಯ ವಿಧಾನ:**

1. ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007 ರ ಅನ್ವಯ ನೇರ ನೇಮಕಾತಿ ಮೂಲಕ ನಡೆಸಲಾಗುವುದು.

2. ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಅಂಕಗಳ ಆಧಾರದ ಮೇಲೆ 01 ಹುದ್ದೆಗೆ 25 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ

ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

3. ಸಂದರ್ಶವು 10 ಅಂಕಗಳನ್ನೊಳಗೊಂಡಿರುತ್ತದೆ.

**ವಿಶೇಷ ಟಿಪ್ಪಣಿ:** ಆಯ್ಕೆಯಾದ ಅಭ್ಯರ್ಥಿಗಳು (NPS) ನೂತನ ಪಿಂಚಣಿ ಯೋಜನೆಗೆ ಒಳಪಡುತ್ತಾರೆ.

**ವಯೋಮಿತಿ:**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು –

01. ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

02. ಗರಿಷ್ಠ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 40 ವರ್ಷ |
| 2 ಎ, 2 ಬಿ, 3 ಎ, 3 ಬಿ | 43 ವರ್ಷ |
| ಪ.ಜಾತಿ, ಪ.ಪಂಗಡ, ಪ್ರವರ್ಗ-1 | 45 ವರ್ಷ |

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

**ವಿಶೇಷ ಸೂಚನೆ:** ದಿನಾಂಕ: 29.01.2026 ರ ಸರ್ಕಾರಿ ಆದೇಶ ಸಂಖ್ಯೆ: **ಸಿಆಸುಇ 262 ಸೇನೆನಿ 2025** ಬೆಂಗಳೂರು ಮತ್ತು ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರವರ ಪತ್ರ ಸಂಖ್ಯೆ: **DJA**/400/2021 **ದಿನಾಂಕ: 24.02.2026** ರ ನಿರ್ದೇಶದನ್ವಯ, ಸದರಿ ಸರ್ಕಾರಿ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ ದಿನಾಂಕ 31.12.2027 ರವರೆಗೆ ನೇರ ನೇಮಕಾತಿ

ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one time measure) **5** ವರ್ಷಗಳ ಸಡಿಳಿಕೆ ನೀಡಿ ಆದೇಶಿಸಲಾಗಿದೆ.

**ವಯೋಮಿತಿ ಸಡಿಲಿಕೆ:**

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

3. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೊ ಅಷ್ಟು ವರ್ಷಗಳು ಅಥವಾ

5 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

4. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

5. ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

6. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

7. ಮಾಜಿ ಸೈನಿಕರು, ವಿಧವೆಯರು, ಅಂಗವಿಕಲರು ಮತ್ತು ಜೀತಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪ್ರವನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ಪಡೆದಿಟ್ಟುಕೊಂಡಿರಡಕ್ಕದ್ದು.

**ವಿಶೇಷ ಸೂಚನೆ:**

1. ಈ ನೇಮಕಾತಿ ಆದೇಶವು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 01 ಸೆಹಿಮ 2026, ಬೆಂಗಳೂರು ದಿನಾಂಕ: 27.02.2026 ರಲ್ಲಿ ತಿಳಿಸಿರುವಂತೆ ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.

2. ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.

3. 10 ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿ ಅಥವಾ ಗ್ರೇಡ್ (Grade) ನಲ್ಲಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳನ್ನು ನಮೂದಿಸಿದ ಅಂಕಪಟ್ಟಿಯನ್ನು ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದೊಳಗೆ ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರಬೇಕು.

ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲಾತಿಗಳನ್ನು ಒದಗಿಸಲು ತಪ್ಪಿದ್ದಲ್ಲಿ, ಅಂತಹ ಅಭ್ಯರ್ಥಿಯನ್ನು ಪರಿಗಣಿಸಲಾಗುವುದಿಲ್ಲ.

ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ-ಕಾಲಕ್ಕೆ ಗೌರವಾನ್ವಿತ ಉಚ್ಚ ನ್ಯಾಯಾಲಯ/ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತದೆ.

ಯಾವುದೇ ಅಭ್ಯರ್ಥಿಯು ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯುವುದು ಮತ್ತು ಈ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ.

**ಪರೀವೀಕ್ಷಣ ಅವಧಿ:**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ.

**ಅರ್ಜಿ ಸಲ್ಲಿಸುವ ವಿಧಾನ**

ನಿಗದಿತ ಅರ್ಜಿ ಶುಲ್ಕ ಹಾಗೂ ಪಾವತಿಸಬೇಕಾದ ವಿಧಾನ:

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಹಾಗೂ ಅಂಗವಿಕಲ ಅಭ್ಯರ್ಥಿ | ಯಾವುದೇ ಶುಲ್ಕವಿಲ್ಲ |
| ಪ್ರವರ್ಗ - 2 ಎ, 2 ಬಿ, 3 ಎ, 3 ಬಿ ಅಭ್ಯರ್ಥಿಗಳಿಗೆ | ರೂ. 150/– |
| ಸಾಮಾನ್ಯ ವರ್ಗ | ರೂ. 300/– |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್ ಸೈಟ್ https://mysuru.dcourts.gov.in/notice-category/recruitments/ ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ State Bank Collect ಮೂಲಕ Online payment through net banking/credit banking/debit card/challan download ಸೌಲಭ್ಯದ ಮೂಲಕ ಶುಲ್ಕ ಪಾವತಿ ಮಾಡಬಹುದಾಗಿದೆ.

ಈ ರೀತಿ Net banking/credit banking/debit card/challan download ಸೌಲಭ್ಯದ ಮೂಲಕ ಶುಲ್ಕ ಪಾವತಿ ಮಾಡಲು ಇಚ್ಚಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಂಡು ಎಸ್.ಬಿ.ಐ. ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು.

ಇದನ್ನು ಹೊರತುಪಡಿಸಿ ಯಾವುದೇ ನಗದು, ಡಿಮ್ಯಾಂಡ್ ಡ್ರಾಫ್ಟ್: ಪೋಸ್ಟಲ್ ಆರ್ಡರ್ : ಮನಿ ಆರ್ಡರ್ ಇತ್ಯಾದಿಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ. ಆದ್ದರಿಂದ ಎಲ್ಲಾ ಮಾಹಿತಿಗಳನ್ನು ಖಾತ್ರಿ ಪಡಿಸಿಕೊಂಡು ಅರ್ಜಿ ಸಲ್ಲಿಸತಕ್ಕದ್ದು.

**ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:**

01. 10 ನೇ ತರಗತಿ/ತತ್ಸಮಾನ ಪರೀಕ್ಷೆಯ ಗರಿಷ್ಠ ಹಾಗೂ ಗಳಿಸಿದ ಅಂಕಗಳನ್ನು ಸರಿಯಾಗಿ ನಮೂದಿಸತಕ್ಕದ್ದು. ಅಂಕಗಳ ಬದಲಿಗೆ ಪಾಯಿಂಟ್ ಗಳಿದ್ದಲ್ಲಿ, ಗರಿಷ್ಟ ಹಾಗೂ ಗಳಿಸಿದ ಪಾಯಿಂಟ್ ಗಳು ಮತ್ತು ಶೇಕಡಾವಾರು ಅಂಕಗಳನ್ನು, ಸಂಖ್ಯೆಗಳಲ್ಲಿ ಸಮರ್ಪಕವಾಗಿ ನಮೂದಿಸತಕ್ಕದ್ದು, ಅಂಕಗಳನ್ನು ತಪ್ಪಾಗಿ ನಮೂದಿಸಿದ್ದಲ್ಲಿ ಅಭ್ಯರ್ಥಿಗಳೇ ಹೊಣೆಗಾರರು.

02. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

03. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐ.ಡಿ.ಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

04. ಅರ್ಹ ಅಭ್ಯರ್ಥಿಗಳಿಗೆ SMS/E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ / ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ/ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು. ಸಂದರ್ಶನ/ಅರ್ಹತಾ ಪರೀಕ್ಷೆಯ ಪ್ರವೇಶ ಪತ್ರಗಳನ್ನು ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಂಡು ತಮ್ಮೊಂದಿಗೆ ತರಬೇಕು.

05. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 c.m. ಉದ್ದ X 3.6 c.m. ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್ ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ಇ) ಅಭ್ಯರ್ಥಿಯು ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 c.m. ಉದ್ದ X 7.5 c.m. ಅಗಲವುಳ್ಳದ್ದಾಗಿರಬೇಕು ಮತ್ತು 25 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು) ಅಪ್ ಲೋಡ್ ಮಾಡಬೇಕು.

06. ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕವನ್ನು ತುಂಬಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

07. ನ್ಯಾಯಾಲಯದ ಅಧಿಕೃತ ವೆಬ್ ಸೈಟ್ ನಲ್ಲಿ ಅರ್ಜಿಯನ್ನು ಆನ್ ಲೈನ್ ಮೂಲಕ ನೋಂದಾಯಿಸಲು / ಸಲ್ಲಿಸಲು ದಿನಾಂಕ 31.05.2026 ರ ರಾತ್ರಿ 11.59 ರವರೆಗೆ ಅವಕಾಶವಿರುತ್ತದೆ.

08. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

09. ಆನ್ ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲಾ.

**ಇತರೆ ಸೂಚನೆಗಳು:**

01. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿ/ವಯೋಮಿತಿ ರಿಯಾಯಿತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆ ಹೊಂದಿದ ಅಥವಾ ವಿಮುಕ್ತಿ ಹೊಂದಿದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

02. ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಹುದ್ದೆಗೆ ಆಯ್ಕೆಯಾದ ಸಂದರ್ಭದಲ್ಲಿ ತಮ್ಮ ನೇಮಕಾತಿ ಪ್ರಾಧಿಕಾರದಿಂದ ನೀಡಲಾಗುವ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಹಾಜರುಪಡಿಸತಕ್ಕದ್ದು.

03. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ ಡಿ ಯಲ್ಲಿ ಪ್ರವರ್ಗ 1 ರ ಅಭ್ಯರ್ಥಿಗಳು ನಮೂನೆ ಇ ಯಲ್ಲಿ ಮತ್ತು ಪ್ರವರ್ಗ 2 ಎ, 2 ಬಿ, 3 ಎ, 3 ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ ಇಫ್ ರಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸ್ವೀಕರಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

04. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ದಿ: 10.08.2005 ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/96/ಸೇನೆನಿ/2005 ಅನ್ವಯ ನಿಗದಿತ ನಮೂನೆ-2 ರಲ್ಲಿ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಇಟ್ಟುಕೊಳ್ಳತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ

ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

05. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2 ರ ಜೊತೆ ನಮೂನೆ - 1 ರಲ್ಲೂ ದೃಢೀಕರಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು.

06. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ : 19.11.2005 ರ ಸರ್ಕಾರದ ಅಧೀಕೃತ ಜ್ಞಾಪನಾ ಸಂಖ್ಯೆ: ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

07. ವಿಧವೆಯರು, ಜೀತ ಕರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಪಡೆದಿರಬೇಕು.

08. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.

09. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಚೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

10. ಸಂದರ್ಶನದ ಸಮಯದಲ್ಲಿ ದಾಖಲೆ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ, (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆ ಪ್ರಮಾಣ ಪತ್ರ), ಜಾತಿ ಪ್ರಮಾಣ ಪತ್ರ, ಗ್ರಾಮೀಣ ಅಭ್ಯರ್ಥಿ/ಅಂಗವಿಕಲ ಅಭ್ಯರ್ಥಿ/ಮಾಜಿ ಸೈನಿಕ ಅಭ್ಯರ್ಥಿಗಳ ಮೀಸಲಾತಿಗೆ ಸಂಬಂಧಿಸಿದಂತೆ ಕ್ಲೇಮ್ ಮಾಡಿದ ಅಭ್ಯರ್ಥಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಹಾಗೂ ವಯೋಮಿತಿ ರಿಯಾಯಿತಿ

ಕೋರುವ ಅಭ್ಯರ್ಥಿಗಳು ನಿಗದಿತ ಪ್ರಮಾಣ ಪತ್ರಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.

11. ಎಲ್ಲಾ ಮೀಸಲಾತಿಗಳಿಗೂ ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸುವ ಅಗತ್ಯವಿಲ್ಲ. ಎಲ್ಲಾ ಮೀಸಲಾತಿಗಳು ಒಳಪಟ್ಟಂತೆ ಒಂದೇ ಅರ್ಜಿಯನ್ನು ಸಲ್ಲಿಸತಕ್ಕದ್ದು.

12. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

13. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡು ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್ ಗೂ ಸಹ ಗುರಿಯಾಗಬೇಕಾಗಿರುತ್ತದೆ. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ಮೇಲೆ ಯಾವುದೇ ಸಮಯದಲ್ಲಾದರೂ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

14. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಯಿಂದ ಅನರ್ಹಗೊಳಿಸಲಾಗುವುದು.

15. ಯಾವುದೇ ಅಭ್ಯರ್ಥಿಯು ಸರ್ಕಾರಿ / ಸರ್ಕಾರೇತರ ಅಧಿಕಾರಿಗಳಿಂದ ತನ್ನ ಅಭ್ಯರ್ಥಿತ್ವದ ಬಗ್ಗೆ ಪ್ರಭಾವ ಬೀರಿದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

ಸಹಿ/-

**(ಉಷ ರಾಣಿ)**

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಮೈಸೂರು.

**ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆ:**

ಮಹಾವಿಲೇಖನಾಧಿಕಾರಿಗಳು,
ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ,
ಬೆಂಗಳೂರು – 560 001.

**ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ ಇ–ಮೇಲ್ ಮುಖಾಂತರ ರವಾನಿಸಲಾಗಿದೆ:**

1. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ್, ಗುಲ್ಬರ್ಗ, ಹಾಸನ, ಹಾವೇರಿ, ಕೊಡಗೂ, ಕೋಲಾರ, ಕೊಪ್ಪಳ, ಮಂಗಳೂರು, ಮಂಡ್ಯ, ರಾಮನಗರ, ರಾಯಚೂರು, ತುಮಕೂರು, ಉಡುಪಿ, ಕಾರವಾರ, ಶಿವಮೊಗ್ಗ ಮತ್ತು ಯಾದಗಿರಿ.

2. ವಿಲೇಖನಾಧಿಕಾರಿಗಳು, ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು.

3. ನ್ಯಾಯಾಧೀಶರು, ಕುಟುಂಬ ನ್ಯಾಯಾಲಯ, ಮೈಸೂರು.

4. ಅಧ್ಯಕ್ಷಾಧಿಕಾರಿಗಳು, ಕಾರ್ಮಿಕ ನ್ಯಾಯಾಲಯ, ಮೈಸೂರು.

5. ಅಧ್ಯಕ್ಷಾಧಿಕಾರಿಗಳು, ಔದ್ಯಮಿಕ ನ್ಯಾಯಾಧಿಕರಣ, ಮೈಸೂರು.

6. 8 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹುಣಸೂರು.

7. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು, ಮೈಸೂರು.

8. ನ್ಯಾಯಾಧೀಶರು, ಲಘು ವ್ಯವಹಾರಗಳ ನ್ಯಾಯಾಲಯ, ಮೈಸೂರು.

9. ಸದಸ್ಯ ಕರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮೈಸೂರು.

10. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ನಂಜನಗೂಡು.

11. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ತಿ. ನರಸೀಪುರ.

12. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ಕೆ.ಆರ್.ನಗರ.

13. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ಹುಣಸೂರು.

14. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ಪಿರಿಯಾಪಟ್ಟಣ.

15. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ಹೆಚ್.ಡಿ.ಕೋಟೆ.

16. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ಮೈಸೂರು.

17. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ನಂಜನಗೂಡು.

18. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ತಿ. ನರಸೀಪುರ.

19. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ಕೆ.ಆರ್.ನಗರ.

20. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ಹುಣಸೂರು.

21. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ಪಿರಿಯಾಪಟ್ಟಣ.

22. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂಡಾಧಿಕಾರಿಗಳು, ಹೆಚ್.ಡಿ.ಕೋಟೆ.

23. ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, 2 ನೇ ನ್ಯಾಯಾಲಯ, ಮೈಸೂರು.

24. ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, 3 ನೇ ನ್ಯಾಯಾಲಯ, ಮೈಸೂರು.

25. ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, 4 ನೇ ನ್ಯಾಯಾಲಯ, ಮೈಸೂರು.

26. ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, 5 ನೇ ನ್ಯಾಯಾಲಯ, ಮೈಸೂರು.

**ಇವರಿಗೆ:**

1. ರಿಜಿಸ್ಟ್ರಾರ್ (ಕಂಪ್ಯೂಟರ್), ಗೌರವಾನ್ವಿತ ಉಚ್ಚ ನ್ಯಾಯಾಲಯ, ಬೆಂಗಳೂರು – ಇವರಿಗೆ ಆನ್ ಲೈನ್ ಸಹಾಯ, ಎಸ್.ಎಂ.ಎಸ್ ಗೇಟ್ ವೇ ಹಾಗೂ ಇ–ಮೇಲ್ ಗೇಟ್ ವೇ ಸೌಲಭ್ಯ ನೀಡುವಂತೆ ಕೋರಿ.

2. ನೋಡಲ್ ಅಧಿಕಾರಿ (ಮುಖ್ಯ ಆಡಳಿತಾಧಿಕಾರಿಗಳು), ಇ–ಗೆಜೆಟ್, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು – ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಣೆಗಾಗಿ.

3. ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ನಂ. 17, ಭಗವಾನ್ ಮಹಾವೀರ (ಇನ್ ಫೆಂಟ್ರಿ) ಜೈನ್ ರಸ್ತೆ, ಬೆಂಗಳೂರು – 560001 – ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ. (ದ್ವಿಪ್ರತಿಯಲ್ಲಿ)

4. ಉಪನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಧನ್ವಂತರಿ ರಸ್ತೆ, ಮೈಸೂರು – ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ. (ಸಂಕ್ಷಿಪ್ತ ಅಧಿಸೂಚನೆ – ದ್ವಿಪ್ರತಿಯಲ್ಲಿ)

5. ಉದ್ಯೋಗಾಧಿಕಾರಿಗಳು, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಮೈಸೂರು ಇವರಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ.

6. ರಾಜ್ಯ ಸರ್ಕಾರದ www.karnataka.gov.in ಜಾಲತಾಣಕ್ಕೆ ಪ್ರಕಟಣೆಗಾಗಿ.

7. ಸಾಫ್ಟ್ ವೇರ್ ಟೆಕ್ನಿಷೀಯನ್, ಕಂಪ್ಯೂಟರ್ ವಿಭಾಗ, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು – ಇವರಿಗೆ Webhost ಮಾಡುವ ಸಲುವಾಗಿ, ಗೌರವಾನ್ವಿತ ಉಚ್ಚ ನ್ಯಾಯಾಲಯದ ಕಂಪ್ಯೂಟರ್ ವಿಭಾಗದೊಂದಿಗೆ ಸಂಪರ್ಕದಲ್ಲಿದ್ದು ಆನ್ ಲೈನ್ ಅಧಿಸೂಚನೆಯ ಸಂಪೂರ್ಣ ಕಾರ್ಯವನ್ನು ಪೂರ್ಣಗೊಳಿಸುವ ಸಲುವಾಗಿ ಹಾಗೂ ಕ್ರಮ ಸಂಖ್ಯೆ 01 ರಿಂದ 26 ರವರೆಗಿನ ನ್ಯಾಯಾಲಯಗಳಿಗೆ ಇ – ಮೇಲ್ ಮುಖಾಂತರ ಕಳುಹಿಸುವ ಸಲುವಾಗಿ.